2014ನೇ ಸಾಲಿನ ಸಿ.ಇ.ಟಿ ಕೌನ್ಸಿಲಿಂಗ್ ಪ್ರಕ್ರಿಯೆ

172(352) **ಶ್ರೀ ಸುಧಾಕರ್ ಲಾಲ್ ಪಿ.ಆರ್ (ಕೊರಟಗೆರೆ):–** ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

ಅ) 2014ನೇ ಶೈಕ್ಷಣಿಕ ವರ್ಷದಲ್ಲಿ ನಡೆಯುತ್ತಿರುವ ಸಿಇಟಿ ಕೌನ್ಸಿಲಿಂಗ್‌ನಲ್ಲಿ ಅಕ್ರಮಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ;

(ಆ) ಇಂತಹ ಅಕ್ರಮಗಳನ್ನು ತಡೆಯಲು ವಿಶೇಷ ಸಮಿತಿಯನ್ನು ನೇಮಿಸಲಾಗಿದೆಯೇ; ಹಾಗಿದ್ದಲ್ಲಿ, ಸಮಿತಿಯು ಯಾವ ರೀತಿ ಕಾರ್ಯನಿರ್ವಹಿಸುತ್ತಿವೆ ;

(ಇ) ಸಮಿತಿಯು ಈವರೆವಿಗೂ ಎಷ್ಟು ಅಕ್ರಮ ಪ್ರಕರಣಗಳನ್ನು ಪತ್ತೆ ಹಚ್ಚಿದೆ ; ಎಷ್ಟು ವಿದ್ಯಾರ್ಥಿ ಹಾಗೂ ಪೋಷಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿದೆ;

(ಈ) 2014 ನೇ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಸಿಇಟಿ ಕೌನ್ಸಿಲಿಂಗ್‌ನಲ್ಲಿ ಎಷ್ಟು ಸೀಟುಗಳನ್ನು ನೀಡಲಾಗಿದೆ ; ಎಷ್ಟು ಸೀಟುಗಳು ಬಾಕಿ ಇವೆ ;

(ಉ) ಬಾಕಿ ಉಳಿದಿರುವ ಸೀಟುಗಳನ್ನು ಯಾವ ರೀತಿ ಭರ್ತಿ ಮಾಡಲಾಗುವುದು ?

(ವಿವರ ನೀಡುವುದು)

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು):–

(ಅ) ಇಲ್ಲ.

(ಆ) ಉದ್ಭವಿಸುವುದಿಲ್ಲ.

(ಇ) ಉದ್ಭವಿಸುವುದಿಲ್ಲ.

(ಈ) 2014ನೇ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಒಟ್ಟು 68471 ಸರ್ಕಾರಿ ಸೀಟುಗಳನ್ನು ಸಿಇಟಿ ಮೂಲಕ ಹಂಚಿಕೆ ಮಾಡಲು ನೀಡಲಾಗಿದೆ. ವಿವರಗಳು ಕೆಳಕಂಡಂತಿದೆ.

ಕೋರ್ಸುಗಳ ವಿವರ	ಸೀಟುಗಳ ಸಂಖ್ಯೆ
ಮೆಡಿಕಲ್	1803
ಡೆಂಟಲ್	782
ಇಂಜಿನಿಯರಿಂಗ್	61319
	(ಆಡಳಿತ ಮಂಡಳಿಯಿಂದ ಆಧ್ಯರ್ಪಿಸಿದ ಸೀಟುಗಳು–8003+ಎಸ್‌ಎನ್‌ಕ್ಯೂ–4877

ಆರ್ಕಿಟೆಕ್ಚರ್	692
ಫಾರ್ಮ್ ಸೈನ್ಸ್ ಕೋರ್ಸ್ (BSC, Agri, BVSC, etc)	2616
ಫಾರ್ಮ ಸಿ (B Pharma & Pharma D)	1259

ಪ್ರಸ್ತುತ ಸೀಟು ಹಂಚಿಕೆ ಪ್ರಕ್ರಿಯೆ ಚಾಲ್ತಿಯಲ್ಲಿರುವುದರಿಂದ ಈ ಹಂತದಲ್ಲಿ ಬಾಕಿ ಉಳಿಯುವ ಸೀಟುಗಳ ಮಾಹಿತಿ ಲಭ್ಯವಾಗುವುದಿಲ್ಲ.

(ಊ) ಬಾಕಿ ಉಳಿಯುವ ಸೀಟುಗಳನ್ನು ನಿಯಮಾನುಸಾರ 2ನೇ ಸುತ್ತಿನಲ್ಲಿ ಹಂಚಿಕೆ ಮಾಡಲಾಗುವುದು.

ಅಂಗನವಾಡಿ ಕಟ್ಟಡಗಳ ನಿರ್ಮಾಣ

173(353) **ಶ್ರೀ ಸುಧಾಕರ್ ಲಾಲ್ ಪಿ.ಆರ್ (ಕೊರಟಗೆರೆ)** :– ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ & ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ :–

(ಅ) ರಾಜ್ಯದ ಕೆಲವು ಅಂಗನವಾಡಿ ಹಾಗೂ ಮಿನಿ ಅಂಗನವಾಡಿಗಳು ಸ್ವಂತ ಕಟ್ಟಡ ಇಲ್ಲದೇ ಬಾಡಿಗೆ ಕಟ್ಟಡಗಳಲ್ಲಿ ಮತ್ತು ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸ್ವಂತ, ಬಾಡಿಗೆ ಮತ್ತು ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸ್ವಂತ ಕಟ್ಟಡಗಳ ನಿರ್ಮಾಣ ಹಾಗೂ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ಪುನರ್ ನಿರ್ಮಾಣದ ಕುರಿತಾಗಿ ಸರ್ಕಾರ ಚಿಂತನೆ ನಡೆಸಿದೆಯೇ ;

(ಈ) ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಪ್ರಸಕ್ತ ಸಾಲಿನಲ್ಲಿ ಸರ್ಕಾರ ಅನುದಾನ ನಿಗದಿಪಡಿಸಿ ಬಿಡುಗಡೆಗೊಳಿಸಿದೆಯೇ ; (ವಿವರ ನೀಡುವುದು)

(ಉ) ಕಟ್ಟಡಗಳ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಕಾಲಮಿತಿ ಏನಾದರೂ ವಿಧಿಸಿದೆಯೇ ; ಹಾಗಿದ್ದಲ್ಲಿ, ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ & ಸಂಸ್ಕೃತಿ ಸಚಿವರು) :–

(ಅ) ಸರ್ಕಾರದ ಗಮನಕ್ಕೆ ಬಂದಿದೆ.